# ಕೀರ್ತನೆಗಳು 23:1–6

ಯೆಹೋವನು ನನಗೆ ಕುರುಬನು; ಕೊರತೆಪಡೆನು.
ಆತನು ಹಸುರುಗಾವಲುಗಳಲ್ಲಿ ನನ್ನನ್ನು ತಂಗಿಸುತ್ತಾನೆ;
ವಿಶ್ರಾಂತಿಕರವಾದ ನೀರುಗಳ ಬಳಿಗೆ ಬರಮಾಡುತ್ತಾನೆ.
ನನ್ನ ಪ್ರಾಣವನ್ನು ಉಜ್ಜೀವಿಸಮಾಡಿ ತನ್ನ ಹೆಸರಿಗೆ ತಕ್ಕಂತೆ
ನೀತಿಮಾರ್ಗದಲ್ಲಿ ನನ್ನನ್ನು ನಡಿಸುತ್ತಾನೆ.
ನಾನು ಕಾರ್ಗತ್ತಲಿನ ಕಣಿವೆಯಲ್ಲಿ ನಡೆಯುವಾಗಲೂ ನೀನು
ಹತ್ತಿರವಿರುವದರಿಂದ ಕೇಡಿಗೆ ಹೆದರೆನು;
ನಿನ್ನ ದೊಣ್ಣೆಯೂ ನಿನ್ನ ಕೋಲೂ ನನಗೆ ಧೈರ್ಯ ಕೊಡುತ್ತವೆ.
ವೈರಿಗಳ ಮುಂದೆಯೇ ನೀನು ನನಗೋಸ್ಕರ ಔತಣವನ್ನು
ಸಿದ್ಧಪಡಿಸುತ್ತೀ; ನನ್ನ ತಲೆಗೆ ತೈಲವನ್ನು ಹಚ್ಚಿಸುತ್ತೀ.
ನನ್ನ ಪಾತ್ರೆಯು ತುಂಬಿ ಹೊರಸೂಸುತ್ತದೆ.
ನಿಶ್ಚಯವಾಗಿ ನನ್ನ ಜೀವಮಾನದಲ್ಲೆಲ್ಲಾ
ಶುಭವೂ ಕೃಪೆಯೂ ನನ್ನನ್ನು ಹಿಂಬಾಲಿಸುವವು.
ನಾನು ಸದಾಕಾಲವೂ ಯೆಹೋವನ ಮಂದಿರದಲ್ಲಿ ವಾಸಿಸುವೆನು.